ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19 :** **ದಿನಾಂಕ : 25–08–2018**

# ಪತ್ರಿಕಾ ಆಮಂತ್ರಣ

**1.** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕಂದಾಯ ಇಲಾಖೆಯ ಎಲ್ಲಾ ನೌಕರರೊಂದಿಗೆ ಏಕ ಕಾಲಕ್ಕೆ ಸಂಪರ್ಕ ಸಾಧಿಸಬಹುದಾದ ಗ್ರೂಫ್ ಟಾಕ್ ಮೊಬೈಲ್ ಆ್ಯಪ್ ಬಿಡುಗಡೆ:

ಕರೀಗೌಡ, ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ

ದಿನಾಂಕ: 27–08–2018 ಸೋಮವಾರ ಸಮಯ: ಬೆಳಿಗ್ಗೆ : 10–30 ಗಂಟೆಗೆ
ಸ್ಥಳ: ಜಿಲ್ಲಾಧಿಕಾರಿಗಳ ಸಭಾಂಗಣ, ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳ ಕಚೇರಿ, ಮೊದಲನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ, ಡಾ: ಬಿ.ಆರ್. ಅಂಬೇಡ್ಕರ್ ರಸ್ತೆ, ಬೆಂಗಳೂರು– 560 001

**2.** ಕರ್ನಾಟಕ ರಾಜ್ಯ ಸರ್ಕಾರಿ ಅಂಧ ನೌಕರರ ಸಂಘದ ಜಾಲತಾಣ ಲೋಕಾರ್ಪಣೆ ಹಾಗೂ ವಿಶೇಷ ಸಾಧನೆ ಮಾಡಿರುವ ಅಂಧ ನೌಕರರಿಗೆ ಸನ್ಮಾನ :

**<u>ಉದ್ಘಾಟನೆ:</u>**

ಡಿ. ಸಿ. ತಮ್ಮಣ್ಣ, ಸಾರಿಗೆ ಸಚಿವರು.

**ಅಧ್ಯಕ್ಷತೆ:**

ರಮೇಶ ಸಂಕರೆಡ್ಡಿ, ಸಹಾಯಕ ಪ್ರಾಧ್ಯಾಪಕರು, ಪ್ರಥಮ ದರ್ಜೆ ಕಾಲೇಜು, ಗದಗ ಹಾಗೂ ಅಧ್ಯಕ್ಷರು, ಕರ್ನಾಟಕ ರಾಜ್ಯ ಅಂಧ ನೌಕರರ ಸಂಘ

ದಿನಾಂಕ: 26–08–2018, ಭಾನುವಾರ, ಸಮಯ : ಬೆಳಿಗ್ಗೆ 10.30 ಗಂಟೆಗೆ.

ಸ್ಥಳ: ಮುಖ್ಯಮಂತ್ರಿ ಸಭಾಂಗಣ, ಕರ್ನಾಟಕ ಸಚಿವಾಲಯ ಕ್ಲಬ್ ಆವರಣ, ಕಬ್ಬನ್ ಉದ್ಯಾನ, ಬೆಂಗಳೂರು – 560 001.

3. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಯೋಜಿಸಿರುವ ಬ್ರಹ್ಮಶ್ರೀ ನಾರಾಯಣಗುರು ಜಯಂತಿ:

**ಉದ್ಘಾಟನೆ:**

ಹೆಚ್. ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

**ಮುಖ್ಯ ಅತಿಥಿ:**

ಅನಂತಕುಮಾರ್, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.
ಡಾ ಜಿ. ಪರಮೇಶ್ವರ, ಉಪ ಮುಖ್ಯಮಂತ್ರಿಗಳು,
ಡಾ. ಜಯಮಾಲ ರಾಮಚಂದ್ರ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು.
ಕೋಟ ಶ್ರೀ ಪೂಜಾರಿ, ಪ್ರತಿಪಕ್ಷ ನಾಯಕರು, ವಿಧಾನ ಪರಿಷತ್,
ಆರ್. ಸಂಪತ್ ರಾಜ್, ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಬಿ. ಕೆ. ಹರಿಪ್ರಸಾದ್, ರಾಜ್ಯಸಭಾ ಸದಸ್ಯರು

**ಅಧ್ಯಕ್ಷತೆ:**

ಡಾ. ಉದಯ್ ಬಿ. ಗರುಡಾಚಾರ್ ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ.

ದಿನಾಂಕ : 27-08-2018, ಸೋಮವಾರ, ಸಮಯ: ಸಂಜೆ 5.30 ಗಂಟೆಗೆ.

ಸ್ಥಳ: ರವೀಂದ್ರ ಕಲಾಕ್ಷೇತ್ರ, ಬೆಂಗಳೂರು.

# ಪತ್ರಿಕಾ ಪ್ರಕಟಣೆ

**ಸಂಖ್ಯೆ: 883/983**

## ಮಕ್ಕಳಿಗೆ ವೃತ್ತಿ ತರಬೇತಿಗಿಂತ ಕೌಶಲ್ಯಾಭಿವೃದ್ಧಿಯ ಕಲ್ಪನೆ ನೀಡುವುದು ಮುಖ್ಯ

**– ಕೇಂದ್ರ ಸಚಿವ ಅನಂತಕುಮಾರ್ ಹೆಗ್ಡೆ**

**ಬೆಂಗಳೂರು, ಆಗಸ್ಟ್ 25, (ಕರ್ನಾಟಕ ವಾರ್ತೆ) :**

ಮಕ್ಕಳಿಗೆ ವೃತ್ತಿ ತರಬೇತಿಗಿಂತ ಕೌಶಲ್ಯಾಭಿವೃದ್ಧಿಯ ಕಲ್ಪನೆ ನೀಡುವುದು ಮುಖ್ಯ, ಮಕ್ಕಳ ಕೌಶಲ್ಯಗಳನ್ನು ಗುರುತಿಸುವಂತಹ ಸಮಾಲೋಚನೆಗಳು ವಿಷಯ ತಜ್ಞರಿಂದ ಆಗಬೇಕಾದ ಅಗತ್ಯವಿದೆ ಎಂದು ಕೇಂದ್ರ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ರಾಜ್ಯ ಸಚಿವ ಅನಂತಕುಮಾರ್ ಹೆಗ್ಡೆ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಶಿಕ್ಷಣ ಇಲಾಖೆ ಖಾಸಗಿ ಸಂಸ್ಥೆಗಳ ಸಹಯೋಗದೊಂದಿಗೆ ನಗರದಲ್ಲಿ ಇಂದು ಹಮ್ಮಿಕೊಂಡಿದ್ದ ವಿಷಯ ತಜ್ಞರೊಂದಿಗೆ ಸಮಾಲೋಚನಾ ಮತ್ತು ವೃತ್ತಿ ಶಿಕ್ಷಣದ ಕುರಿತು ಕಾರ್ಯಾಗಾರ ಹಾಗೂ ವೃತ್ತಿ ಸಮಾಲೋಚನಾ ಕೇಂದ್ರಗಳನ್ನು ರಾಜ್ಯದ ಆಯ್ದ 50 ಮಹಿಳಾ ಪದವಿಪೂರ್ವ ಕಾಲೇಜುಗಳಲ್ಲಿ ಪ್ರಾಯೋಗಿಕವಾಗಿ ಉದ್ಘಾಟಿಸಿ ಮಾತನಾಡಿದ ಅವರು ಪ್ರಸ್ತುತ ನಮ್ಮ ದೇಶದಲ್ಲಿ ಮಕ್ಕಳನ್ನು ಕಾರ್ಮಿಕ ವ್ಯವಸ್ಥೆಗೆ ದೂಡುವಂತಹ ಶಿಕ್ಷಣ ವ್ಯವಸ್ಥೆ ಇದೆ. ಎಲ್ಲಿಯ ತನಕ ಸ್ವಂತಿಕೆಯ ಮೇಲೆ ವ್ಯಕ್ತಿತ್ವ ರೂಪುಗೊಳ್ಳುವುದಿಲ್ಲವೋ ಅಲ್ಲಿಯ ತನಕ ಈ ಕಾರ್ಮಿಕ ವ್ಯವಸ್ಥೆಯಿಂದ ಹೊರಬರಲು ಸಾಧ್ಯವಿಲ್ಲ ಎಂದರು.

ಪ್ರೌಢಶಾಲಾ ಮಟ್ಟದಲ್ಲಿಯೇ ಮಕ್ಕಳ ಕೌಶಲ್ಯತೆಯನ್ನು ಗುರುತಿಸುವಂತಹ ಹಾಗೂ ಪೋಷಿಸುವಂತಹ, ಅವರಿಗೆ ಕನಸುಗಳನ್ನು ವಿಸ್ತರಿಸುವಂತಹ ಶಿಕ್ಷಣ ವ್ಯವಸ್ಥೆ ಜಾರಿಯಾಗಬೇಕಾದ ಅಗತ್ಯವಿದೆ. ಈ ಬಗ್ಗೆ ದೇಶದಲ್ಲಿಯೇ ಶಿಕ್ಷಣ ವ್ಯವಸ್ಥೆಯಲ್ಲಿ ಮುಂಚೂಣಿಯಲ್ಲಿರುವ ನಮ್ಮ ಕರ್ನಾಟಕ ಯೋಚಿಸಬೇಕಾದ ಅಗತ್ಯವಿದೆ.

ವೃತ್ತಿ ಕೌಶಲ್ಯ, ವೃತಿ ಶಿಕ್ಷಣ ಹಾಗೂ ಸಮಾಲೋಚನಾ ಕೇಂದ್ರಗಳನ್ನು ರಾಜ್ಯಾದ್ಯಂತ ಪ್ರಾಯೋಗಿಕವಾಗಿ ಪದವಿಪೂರ್ವ ಕಾಲೇಜುಗಳಲ್ಲಿ ಆರಂಭಿಸುತ್ತಿರುವುದು ಶ್ಲಾಘನೀಯ. ಈ ಒಂದು ದಿನದ ಕಾರ್ಯಾಗಾರ ರಾಜ್ಯಾದ್ಯಂತ ವಿಸ್ತರಿಸಲು ಅಗತ್ಯವಿರುವ ಅಂಶಗಳ ಬಗ್ಗೆ ಪೂರ್ಣವಾಗಿ ಚರ್ಚಿಸುವ ವೇದಿಕೆಯಾಗಬೇಕು. ಇಲ್ಲಿ ತೆಗೆದುಕೊಂಡ ತೀರ್ಮಾನಗಳ ಬಗ್ಗೆ ಕೇಂದ್ರ ಸರ್ಕಾರ ಸಕರಾತ್ಮಕವಾಗಿ ಸ್ಪಂಧಿಸಲಿದೆ ಎಂದು ಅವರು ತಿಳಿಸಿದರು.

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎನ್. ಮಹೇಶ್ ಅವರು ಮಾತನಾಡಿ ಮಾನವರನ್ನು ಮಾನವ ಸಂಪನ್ಮೂಲವಾಗಿಸುವ ಜವಾಬ್ದಾರಿ ಶಿಕ್ಷಣ ಇಲಾಖೆಯದ್ದು. ಶಿಕ್ಷಣ ಇಲಾಖೆ ಒಂದು ಸೇವಾವಲಯವಾಗಿದೆ. ಆದಕಾರಣ, ಅತ್ಯಂತ ಸಾಮಾಜಿಕ ಬದ್ಧತೆಯಿಂದ ಇಲಾಖೆಯ ಪ್ರತಿಯೊಬ್ಬರೂ ಕಾರ್ಯನಿರ್ವಹಿಸಬೇಕು.

ಖಾಸಗಿ ಕಂಪೆನಿಗಳು ತಮ್ಮ ಸಾಮಾಜಿಕ ಜವಾಬ್ದಾರಿಯ ಸಾಮಾಜಿಕ ಹೊಣೆಗಾರಿಕೆ ಕಾರ್ಯಕ್ರಮದಡಿ ಕೈಗೊಳ್ಳುವ ಕಾರ್ಯಗಳು ಬೆಂಗಳೂರನ್ನು ಹೊರತುಪಡಿಸಿ ರಾಜ್ಯದ ಇತರೆ ಜಿಲ್ಲೆಗಳಿಗೂ ಸಹ ವಿಸ್ತರಿಸಬೇಕು ಎಂದು ಕರೆಕೊಟ್ಟ ಅವರು ವ್ಯಕ್ತಿ ತನ್ನ ಬದುಕನ್ನು ಕಟ್ಟಿಕೊಂಡರೆ ಮಾತ್ರ ದೇಶವನ್ನು ಕಟ್ಟಲು ಸಾಧ್ಯ.

ಪ್ರತಿಯೊಬ್ಬರೂ ಉತ್ಪಾದಕ ಶಕ್ತಿಯಾದರೆ ದೇಶ ಬೆಳೆಯುತ್ತದೆ. ಭಾರತೀಯರು ವ್ಯಕ್ತಿತ್ವದಲ್ಲಿ ಅತ್ಯಂತ ಮೇರು ಸ್ಥಾನದಲಿದ್ದಾರೆ. ನಮ್ಮ ಸಾಮಾಜಿಕ ವ್ಯವಸ್ಥೆಯಲ್ಲಿ ಶಿಕ್ಷಣದ ಪಾತ್ರ ಮಹತ್ತರವಾದದ್ದು ಎಂದು ಹೇಳಿದರು.

ಗ್ರಾಮಾಂತರ ಪ್ರದೇಶದ ಮಕ್ಕಳ ಸಾಮರ್ಥ್ಯವನ್ನು ಅರ್ಥಮಾಡಿಕೊಳ್ಳಬೇಕು. ಶಾಲೆ ಮನೆಯ ಮುಂದುವರೆದ ಭಾಗವಾಗಿರಬೇಕು. ಮಗು ಕಲಿಯಬೇಕು ನಾವು ಕಲಿಸಬಾರದು, ಮಕ್ಕಳಿಗೆ ಆತ್ಮವಿಶ್ವಾಸ ತುಂಬಿಸಿ ಕಲಿಸುವ ಕೌಶಲ್ಯ ಕೊನೆಯವರೆಗೂ ಉಳಿಯುತ್ತದೆ. ಪ್ರೌಢ ಶಿಕ್ಷಣದಿಂದಲೇ ಕೌಶಲ್ಯಾಧರಿತ ಶಿಕ್ಷಣ ಆರಂಭವಾಗಬೇಕು ಎಂದು ಅಭಿಪ್ರಾಯವ್ಯಕ್ತಪಡಿಸಿದ ಅವರು ಈ ಕಾರ್ಯಾಗಾರ ಅತ್ಯಂತ ಉಪಯೋಗಕಾರಿಯಾಗಲಿ ಎಂದು ಆಶಯ ವ್ಯಕ್ತಪಡಿಸಿದರು.

ಪದವಿಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರಾದ ಸಿ. ಶಿಖಾ ಅವರು ಇಂದಿನ ಕಾರ್ಯಾಗಾರ ಹಾಗೂ ಪ್ರಾಯೋಗಿಕವಾಗಿ ಆರಂಭವಾಗುತ್ತಿರುವ ಯೋಜನೆಯ ಕುರಿತು ಮಾಹಿತಿಯನ್ನು ಹಂಚಿಕೊಂಡರು.

ಯು.ಎನ್.ಡಿ.ಪಿ. ಮುಖ್ಯಸ್ಥರಾದ ಕ್ಲಮೆಂಟ್ ಚೌವೆಟ್ ಅವರು ಯೋಜನೆಯ ಕುರಿತು ತಮ್ಮ ಸಂಸ್ಥೆ ಹಮ್ಮಿಕೊಂಡಿರುವ ಕಾರ್ಯಗಳನ್ನು ತಿಳಿಸಿದರು.

ಶಿಕ್ಷಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಡಾ ಶಾಲಿನಿ ರಜನೀಶ್ ಅವರು ಸ್ವಾಗತಿಸಿದರು ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರಾದ ಡಾ. ಪಿ.ಸಿ. ಜಾಫರ್ ಅವರು ವಂದನಾರ್ಪಣೆ ಸಲ್ಲಿಸಿದರು.

ಈ ಸಮಯದಲ್ಲಿ ರಾಜ್ಯದ ವಿವಿಧ ಶಾಲೆಗಳಿಂದ ಆಗಮಿಸಿದ್ದ ಮಕ್ಕಳು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಇಂದಿನ ಈ ಕಾರ್ಯಾಗಾರದಲ್ಲಿ ಮೂರು ವಿವಿಧ ವಿಷಯಗಳ ಮೇಲೆ ಅಧಿವೇಶನ ಹಾಗೂ ಪ್ರಶ್ನೋತ್ತರ ಚರ್ಚೆ ನಡೆಯಿತು. ಇದರಲ್ಲಿ ಶಿಕ್ಷಣ ತಜ್ಞರು, ಕೌಶಲ್ಯಾಭಿವೃದ್ಧಿ ತಜ್ಞರು, ಸಮಾಲೋಚಕರು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಖಾಸಗಿ ಸಂಸ್ಥೆಗಳ ಮುಖ್ಯಸ್ಥರು ಪಾಲ್ಗೊಂಡಿದ್ದರು.

**ಸಂಖ್ಯೆ: 884/984**

## <u>ಕಬ್ಬನ್ ಉದ್ಯಾನದಲ್ಲಿ ಈ ಭಾನುವಾರ</u>

ಬೆಂಗಳೂರು, ಆಗಸ್ಟ್ 25, (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನದ (ಕಬ್ಬನ್ ಪಾರ್ಕ್) ಒಳ ರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಆಗಸ್ಟ್ 26 ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನದ (ಕಬ್ಬನ್ ಉದ್ಯಾನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ವಿವಿಧ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ. ಕಬ್ಬನ್ ಉದ್ಯಾನದ ಆವರಣದ ಒಳರಸ್ತೆಗಳಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ನಗರ ಭೂಸಾರಿಗೆ ನಿರ್ದೇಶನಾಲಯದ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಕಬ್ಬನ್ ಉದ್ಯಾನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಪರಿಸರ ಸ್ನೇಹಿ ವಿದ್ಯುತ್ ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದಾಗಿದೆ. ಕಬ್ಬನ್ ಉದ್ಯಾನದ ಬ್ಯಾಂಡ್ ಸ್ಟ್ಯಾಂಡ್‌ನಲ್ಲಿ ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಕರಿಷ್ಮಾ ಅಯ್ಯರ್ ಅವರಿಂದ ಒಡಿಸ್ಸಿ (ಸೋಲೋ) ನೃತ್ಯ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 885/985**

## <u>ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ ಪ್ರವಾಸ</u>

ಬೆಂಗಳೂರು, ಆಗಸ್ಟ್ 25, (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯು ಸೆಪ್ಟೆಂಬರ್ 6 ಮತ್ತು 7 ರಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸಂಬಂಧಿಸಿದ ಭರವಸೆಗಳ ಕುರಿತಂತೆ ಬಳ್ಳಾರಿ ಹಾಗೂ ರಾಯಚೂರು ಜಿಲ್ಲೆಗಳಲ್ಲಿ ಪ್ರವಾಸ ಮಾಡಿ ಪರಿಶೀಲನೆ ನಡೆಸಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 886/986**

# ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 25, (ಕರ್ನಾಟಕ ವಾರ್ತೆ)

ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವ ರಾಜಶೇಕರ ಬಿ. ಪಾಟೀಲ್ ಅವರು ಆಗಸ್ಟ್ 26 ರಿಂದ 31 ರವರೆಗೆ ಬೀದರ್, ಯಾದಗಿರಿ, ಕಲಬುರಗಿ ಜಿಲ್ಲೆಗಳಲ್ಲಿ ಪ್ರವಾಸ ಮಾಡಿ ಸೆಪ್ಟೆಂಬರ್ 1 ರಂದು ಬೆಂಗಳೂರಿಗೆ ವಾಪಸ್ಸಾಗಲಿದ್ದಾರೆ.